# ಕರ್ನಾಟಕ ವಿಧಾನ ಪರಿಷತ್ತು

೦1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :1033
೦2. ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
೦3. ಉತ್ತರಿಸಬೇಕಿದ್ದ ದಿನಾಂಕ : 25-07-2024
೦4. ಉತ್ತರಿಸುವ ಸಚಿವರು. : ಗೃಹ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹುಬ್ಬಳ್ಳಿ ಮತ್ತು ಧಾರವಾಡ ಅವಳಿ ನಗರದಲ್ಲಿನ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹುಬ್ಬಳ್ಳಿ ಮತ್ತು ಧಾರವಾಡ ಅವಳಿ ನಗರದಲ್ಲಿನ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿತ್ತಿರುವುದು ವರದಿಯಾಗಿದ್ದು, ಇವುಗಳನ್ನು ಹತ್ತಿಕ್ಕಲು ಕೈಗೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ: |
| ಆ) | ಅಪರಾಧ ಪ್ರಕರಣಗಳನ್ನು ಹತ್ತಿಕ್ಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; | ದಾಖಲಾದ ಎಲ್ಲಾ ಅಪರಾಧ ಪ್ರಕರಣಗಳಲ್ಲಿ ಆರೋಪಿತರನ್ನು ಕೂಡಲೇ ದಸ್ತಗೀರ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ನಿಗದಿತ ಅವಧಿಯಲ್ಲಿ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಲಾಗುತ್ತಿದೆ.<br><br>ಮಾನ್ಯ ನ್ಯಾಯಾಲಯದಲ್ಲಿ ನಡೆಯುವ ಪ್ರಕರಣಗಳ ವಿಚಾರಣೆಯ ಸಮಯದಲ್ಲಿ ಕೋರ್ಟ್ ಮಾನಿಟರಿಂಗ್ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತಿದೆ.<br><br>ಇ-ಬೀಟ್ ವ್ಯವಸ್ಥೆಯ ಮುಖಾಂತರ ಹಗಲು ಮತ್ತು ರಾತ್ರಿ ಗಸ್ತು ಕರ್ತವ್ಯ ನಿರ್ವಹಿಸಲಾಗುತ್ತಿದೆ.<br><br>112 ಇ.ಆರ್.ಎಸ್.ಎಸ್ ದಿನದ 24 ಗಂಟೆಯ ಸೇವೆಯ ಮುಖಾಂತರ ಕೇವಲ 5 ನಿಮಿಷದ ಅವಧಿಯಲ್ಲಿ ಕರೆ ಮಾಡಿದ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸೈಬರ್ ವಂಚನೆ, ಮಾದಕ ದ್ರವ್ಯ, ಸಂಚಾರ ನಿಯಮಗಳ ಮತ್ತು ಆರ್ಥಿಕ ಅಪರಾಧಗಳ ಕುರಿತು ಶಾಲೆ, ಕಾಲೇಜು ಮತ್ತು ಜನದಟ್ಟಣೆ ಪ್ರದೇಶಗಳಲ್ಲಿ ಮೊಹಲ್ಲಾ ಮೀಟಿಂಗ್‌ಗಳಲ್ಲಿ, ಬೀಟ್ ಮೀಟಿಂಗ್‌ಗಳಲ್ಲಿ ಅರಿವು ಮೂಡಿಸಲಾಗುತ್ತಿದೆ. |

| | | |
|---|---|---|
| | | ಕೆ.ಪಿ ಆಕ್ಟ್ ದಾಖಲಿಸುವ ಮೂಲಕ ಕ್ಷುಲ್ಲಕ ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸಿ ಮಾನ್ಯ ನ್ಯಾಯಾಲಯದ ಮೂಲಕ ದಂಡ ವಿಧಿಸಲಾಗುತ್ತಿದೆ.<br><br>ಪ್ರತಿ ದಿನ Area domination ಮತ್ತು Area familiarisation ಗಾಗಿ ಠಾಣೆಗಳ ಪ್ರಮುಖ ಮತ್ತು ಸೂಕ್ಷ್ಮ ಸ್ಥಳಗಳಿಗೆ ಭೇಟಿ ನೀಡಿ ಜನರಿಗೆ ತಿಳುವಳಿಕೆ ನೀಡಲಾಗುತ್ತಿದೆ.<br><br>ಮಾದಕ ದ್ರವ್ಯ ಅಪರಾಧಗಳಿಗೆ ಸಂಬಂಧಿಸಿದ 175 ಅರೋಪಿಗಳ ಪರೇಡ್ ನಡೆಸಿ ಅವರ ಚಟುವಟಿಕೆಗಳ ಮೇಲೆ ನಿಗಾವಹಿಸಲಾಗಿದ್ದು ಮತ್ತು 158 ಜನರ ಮೇಲೆ ಮುಂಜಾಗೃತಾ ಕ್ರಮ ಜರುಗಿಸಿದ್ದು ಇರುತ್ತದೆ.<br><br>ರೌಡಿ ಜನರ ಮೇಲೆ ಮುಂಜಾಗೃತಾ ಕ್ರಮದ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ. |
| ಇ) | ಅಪರಾಧ ಪ್ರಕರಣಗಳನ್ನು ತಡೆಯಲು ವಿಫಲರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ? | ಅಪರಾಧ ಪ್ರಕರಣಗಳನ್ನು ತಡೆಯಲು ವಿಫಲರಾದ ಅಧಿಕಾರಿಗಳ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡುವಳಿಗಳು) ನಿಯಮಾವಳಿ 1965 / 1989 ರ ನಿಯಮ 6 ಮತ್ತು 7 ರ ಅಡಿಯಲ್ಲಿ ಇಲಾಖಾ ಶಿಸ್ತಿನ ಕ್ರಮ ಜರುಗಿಸಲಾಗುತ್ತಿರುತ್ತದೆ. |

**ಸಂಖ್ಯೆ: ಹೆಚ್‌ಡಿ 42 ಪಿಸಿಹೆಚ್ 2024**

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು